ಮೇಲಣ ತೆರಿಗೆ (3ನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ವೀರಪ್ಪಮೊಯ್ಲಿ(ಮುಖ್ಯಮಂತ್ರಿಗಳು) :- ಸನ್ಮಾನ್ಯ ಉಪಾಧ್ಯಕ್ಷರೇ, ಕರ್ನಾಟಕ ಸರಕುಗಳ ಪ್ರವೇಶದ ಮೇಲಣ ತೆರಿಗೆ(3ನೇ ತಿದ್ದುಪಡಿ) ವಿಧೇಯಕ, 1993 ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ IV & V

6) 1993ರ ಕರ್ನಾಟಕ ಸಿವಿಲ್ ನ್ಯಾಯಾಲಯಗಳ (ತಿದ್ದುಪಡಿ) ವಿಧೇಯಕ.

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :- ಮಾನ್ಯ ಅಧ್ಯಕ್ಷರೇ, 1993ರ ಕರ್ನಾಟಕ ಸಿವಿಲ್ ನ್ಯಾಯಾಲಯಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷರು :- ಪ್ರಸ್ತಾವ ಏನೆಂದರೆ "1993ರ ಕರ್ನಾಟಕ ಸಿವಿಲ್ ನ್ಯಾಯಾಲಯಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು)

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ :- ಮಾನ್ಯ ಅಧ್ಯಕ್ಷರೇ 1993ರ ಕರ್ನಾಟಕ ಸಿವಿಲ್ ನ್ಯಾಯಾಲಯಗಳ(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ VI

7) 1993ರ ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :- ಮಾನ್ಯ ಅಧ್ಯಕ್ಷರೇ, "1993ರ ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕವನ್ನು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಪರವಾಗಿ ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು :- ಪ್ರಸ್ತಾವ " ಏನೆಂದರೆ 1993ರ ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು)

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ(ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :- ಮಾನ್ಯ ಅಧ್ಯಕ್ಷರೇ, 1993ರ ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ VII

ವರದಿಯನ್ನೊಪ್ಪಿಸುವುದು

ಶ್ರೀ ಮುನಿನರಸಿಂಹಯ್ಯ(ದೇವನಹಳ್ಳಿ) :- ಮಾನ್ಯ ಅಧ್ಯಕ್ಷರೇ, ಶ್ರೀ ಮಂಜುನಾಥ್. ಸಿ. ಕುನ್ನೂರ್, ಅಧೀನ ಶಾಸನ ರಚನಾ ಸಮಿತಿಯ ಅಧ್ಯಕ್ಷರ ಪರವಾಗಿ ಅಧೀನ ಶಾಸನ ರಚನಾ ಸಮಿತಿಯ